ವಿದ್ಯುಚ್ಛಕ್ತಿ ಮಂಡಳಿಯಲ್ಲಿ ಕೆಲಸ ಮಾಡುತ್ತಿರುವ ಲೈನ್‌ಮೆನ್‌ಗಳ ಬಗ್ಗೆ

೧೫೧೨. ಶ್ರೀ ಎಂ. ಎಲ್. ಮುತ್ತಣ್ಣನವರ್ (ಗೋಕಾಕ್).—ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಾದಾಮಿ ತಾಲ್ಲೂಕಿನಲ್ಲಿ ವಿದ್ಯುಚ್ಛಕ್ತಿ ಮಂಡಳಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಲೈನ್‌ಮೆನ್‌ಗಳ ಒಟ್ಟು ಸಂಖ್ಯೆ ಎಷ್ಟು?

ಆ) ಸದರಿ ತಾಲ್ಲೂಕಿನ ಕೆರೂರು ವಿಭಾಗದಲ್ಲಿರುವ ಲೈನ್‌ಮೆನ್‌ಗಳ ಸಂಖ್ಯೆ ಎಷ್ಟು ಹಾಗೂ ಎಷ್ಟು ವರ್ಷಗಳಿಂದ ಈ ಸ್ಥಳದಲ್ಲಿಯೇ ಕೆಲಸ ನಿರ್ವಹಿಸುತ್ತಿರುವರು?

ಇ) ನೀರಾವರಿ ಪಂಪುಸೆಟ್ಟುಗಳಿಗೆ ವಿದ್ಯುತ್ ಪೂರೈಕೆಯಲ್ಲಿ ಕೊರತೆಯುಂಟು ಮಾಡಿ ತೊಂದರೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಈ) ಹಾಗಿಲ್ಲದಿದ್ದಲ್ಲಿ ಈಗಲಾದರೂ ಇಲಾಖಾ ತನಿಖೆ ಮಾಡಿಸಿ ಲೈನ್‌ಮೆನ್‌ರವರು ರೈತರಿಗೆ ತೊಂದರೆ ಕೊಡುವುದನ್ನು ತಪ್ಪಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಲಕ್ಷ್ಮೀನರಸಿಂಹಯ್ಯ (ಭಾರಿ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು).—

ಅ) ೪೧

ಆ) ಲೈನ್‌ಮೆನ್‌ಗಳು ಆ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಇರುವರೆಂಬುದಕ್ಕೆ ವಿವರ ಈ ಕೆಳಕಂಡಂತಿದೆ.

೧೯೭೬ ರಿಂದ ಒಬ್ಬರು
೧೯೭೮ ರಿಂದ ೫ ಜನ
೧೯೮೧ ರಿಂದ ೪ ಜನ
೧೯೮೩ ರಿಂದ ಇಬ್ಬರು
೧೯೮೪ ರಿಂದ ೩ ಜನ
೧೯೮೫ ರಿಂದ ಒಬ್ಬರು
೧೯೮೬ ರಿಂದ ೪ ಜನ
೧೯೮೮ ರಿಂದ ಒಬ್ಬರು

ಇ) ಮತ್ತು ಈ) ನಿರ್ದಿಷ್ಟವಾದ ದೂರು ಬಂದಲ್ಲಿ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಹಾಲಿನ ಡೈರಿಯನ್ನು ಪ್ರಾರಂಭಿಸುವುದು

೧೫೨೨. ಶ್ರೀ ಜಿ. ರಾಮದಾಸ್ (ಹೊಸದುರ್ಗ).—ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಮತ್ತು ವರ್ಕ್ಸ್ ಹಾಗೂ ಪಶುಸಂಗೋಪನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

೧) ಹೊಸದಾಗಿ ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ ಹಾಲಿನ ಡೈರಿಗಳನ್ನು ಆರಂಭಿಸಲು ಸರ್ಕಾರದವರು ಉದ್ದೇಶಿಸಿದ್ದಾರೆಯೇ?

೨) ಹಾಗಿದ್ದಲ್ಲಿ ಇದರ ವ್ಯಾಪ್ತಿಗೆ ಚಿತ್ರದುರ್ಗ ಜಿಲ್ಲೆಯನ್ನು ಒಳಪಡಿಸಲಾಗುವುದೇ?

೩) ಚಿತ್ರದುರ್ಗ ಜಿಲ್ಲೆಯಲ್ಲಿ ಉದ್ದೇಶಿತ ಹಾಲಿನ ಡೈರಿಯ ಸಂಖ್ಯೆ ಎಷ್ಟು? ಇದರ ವ್ಯಾಪ್ತಿಗೆ ಬರುವ ತಾಲ್ಲೂಕುಗಳಾವುವು? ಇದಕ್ಕಾಗಿ ಯಾವ ಯಾವ ಗ್ರಾಮಗಳಲ್ಲಿ ಹಾಲು ಉತ್ಪಾದಕರ ಸಂಘಗಳನ್ನು ಸ್ಥಾಪಿಸಲಾಗುವುದು?